# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** 2022-23ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಅಭಿವೃದ್ಧಿಗಾಗಿ ಆಯವ್ಯಯದಲ್ಲಿ ನೀಡಿರುವ ಅನುದಾನದಲ್ಲಿ ಮೊದಲನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:-**

1. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ 01 ಟಿಎಫ್‌ಪಿ 2022, ದಿನಾಂಕ: 04.04.2022.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಪತ್ರ ಸಂಖ್ಯೆ:ಹಿಂವಕಇ/ಲೆಶಾ/ಸಿಆರ್-1/2022-23, ದಿನಾಂಕ:06.04.2022.
3. ಆಯುಕ್ತರು, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಇವರ ಪತ್ರ ಸಂಖ್ಯೆ: ಕ್ರಾ.ವೀ.ಸಂ.ರಾ.ಕ್ಷೇ.ಅ.ಪ್ರಾ/ಸಿಆರ್-01/2022-23/04, ದಿನಾಂಕ:18.04.2022.
4. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ಇವರ ಪ್ರಸ್ತಾವನೆ ಸಂಖ್ಯೆ: ಕರಾಹಿಂವಾ/ಲೆಶಾ/ಸಿಆರ್-03/2022-23, ದಿನಾಂಕ:08.04.2022.
5. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರ ಪ್ರಸ್ತಾವನೆ ಸಂಖ್ಯೆ: ಕವಶಿಸಸ/ಲೆಕ್ಕಪತ್ರ/ಸಿಆರ್186-IX-(4)/2022-23, ದಿನಾಂಕ:05.04.2022.
6. ಆರ್ಥಿಕ ಇಲಾಖೆಯ ಸಲಹಾ ಟಿಪ್ಪಣಿ ಸಂಖ್ಯೆ: ಆಇ 01 ವೆಚ್ಚ-3/2022, ದಿನಾಂಕ:05.04.2022.
7. ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ಮಾಸಿಕ ಭೋಜನಾ ವೆಚ್ಚವನ್ನು ಹೆಚ್ಚಿಸುವ ಕುರಿತಂತೆ ಸರ್ಕಾರದ ಆದೇಶ ಸಂಖ್ಯೆ:ಹಿಂವಕ 285 ಬಿಎಂಎಸ್ 2022, ದಿನಾಂಕ:26.04.2022
8. ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಸ್ಪೋಕನ್ ಇಂಗ್ಲಿಷ್ ತರಬೇತಿಗೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂಖ್ಯೆ: ಹಿಂವಕ 227 ಬಿಎಂಎಸ್ 2022, ದಿನಾಂಕ:04.05.2022.
9. ಇಲಾಖೆಯು ಕಾರ್ಯಕ್ರಮಗಳನ್ನು 2022-23ನೇ ಸಾಲಿನಲ್ಲಿ ಮುಂದುವರೆಸುವ ಕುರಿತಂತೆ ಸರ್ಕಾರದ ಆದೇಶ ಸಂಖ್ಯೆ: ಹಿಂವಕ 308 ಬಿಎಂಎಸ್ 2022, ದಿನಾಂಕ:04.05.2022.
10. ಇಲಾಖೆಯ ಅಧಿಕಾರಿ/ಸಿಬ್ಬಂದಿಗಳಿಗೆ ವೇತನ ಬಿಡುಗಡೆಗೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂಖ್ಯೆ:ಹಿಂವಕ 329 ಬಿಎಂಎಸ್ 2022, ದಿನಾಂಕ:20.04.2022.

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆರ್ಥಿಕ ಇಲಾಖೆಯ ಆದೇಶದಲ್ಲಿ 2022-23ನೇ ಸಾಲಿನಲ್ಲಿ ಮೊದಲನೇ ಮತ್ತು ಎರಡನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಅಧಿಕಾರ ಪ್ರತ್ಯಾಯೋಜಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2),(3),(4) &(5) ರಲ್ಲಿ ಓದಲಾದ ಪತ್ರದಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ಆಯುಕ್ತರು, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಮತ್ತು ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರು 2022-23 ನೇ ಸಾಲಿನ ಅಯವ್ಯಯದಲ್ಲಿ ಇಲಾಖೆಯ ವಿವಿಧ ಯೋಜನೆಯಡಿ ಒದಗಿಸಿರುವ ಅನುದಾನದಲ್ಲಿ ಮೊದಲನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

---2

ಮೇಲೆ ಓದಲಾದ ಕ್ರಮ ಸಂಖ್ಯೆ (6)ರಲ್ಲಿ ಆರ್ಥಿಕ ಇಲಾಖೆಯು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ ಸಲಹಾ ಟಿಪ್ಪಣಿಯನ್ನು ನೀಡಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(7) ರ ಆದೇಶದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸರ್ಕಾರಿ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ, ಸರ್ಕಾರಿ ಆಶ್ರಮ ಶಾಲೆಗಳ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ಶಾಲೆಗಳ ಮತ್ತು ಕಾಲೇಜುಗಳ ಹಾಗೂ ಖಾಸಗಿ ಅನುದಾನಿತ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ, ಖಾಸಗಿ ಅನುದಾನಿತ ಅನಾಥಾಲಯಗಳ ವಿದ್ಯಾರ್ಥಿಗಳಿಗೆ ಮಾಸಿಕ ಭೋಜನಾ ವೆಚ್ಚವನ್ನು ರೂ.150/- ಹೆಚ್ಚಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(8)ರ ಆದೇಶದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳಿಗೆ ಸ್ಪೋಕನ್ ಇಂಗ್ಲಿಷ್ ಮತ್ತು ವ್ಯಕ್ತಿತ್ವ ವಿಕಸನದ ತರಬೇತಿ ನೀಡಲು ಸ್ಪೂರ್ತಿಯ ನಡೆ ಎಂಬ ಹೊಸ ಯೋಜನೆಯನ್ನು ಜಾರಿಗೊಳಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(9) ರಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಯೋಜನೆಗಳನ್ನು ಆರ್ಥಿಕ ಇಲಾಖೆಯು ಉಲ್ಲೇಖ(6) ರ ಸಲಹಾ ಟಿಪ್ಪಣಿಯ ನಿಬಂಧನೆಗೆ ಒಳಪಟ್ಟು 2022-23ನೇ ಸಾಲಿನಲ್ಲಿ ಮುಂದುವರೆಸಿ ಆದೇಶಿಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(10) ರಲ್ಲಿ 2022-23ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ/ಸಿಬ್ಬಂದಿಗಳ ವೇತನಕ್ಕಾಗಿ ಒದಗಿಸಿರುವ ಅನುದಾನದಲ್ಲಿ ಮೊದಲನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡಿ ಆದೇಶಿಸಲಾಗಿದೆ.

ಪ್ರಸ್ತುತ ಕಾರ್ಯಕ್ರಮಗಳ ಅನುಷ್ಠಾನದ ಹಿನ್ನೆಲೆಯಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರಿಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಮೊದಲನೇ ತ್ರೈಮಾಸಿಕ ಕಂತಿನ ಅನುದಾನ ಬಿಡುಗಡೆ ಮಾಡಲು ತೀರ್ಮಾನಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 329 ಬಿಎಂಎಸ್ 2022,**
**ಬೆಂಗಳೂರು, ದಿನಾಂಕ: 07-05-2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ಆಯುಕ್ತರು, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಮತ್ತು ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರಿಗೆ 2022-23ನೇ ಸಾಲಿಗೆ ಒದಗಿಸಿರುವ ಆಯವ್ಯಯದಲ್ಲಿ ಮೊದಲನೇ ತ್ರೈಮಾಸಿಕ ಕಂತಾಗಿ ಶೇ.25ರಷ್ಟು ಅನುದಾನವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ಬಿಡುಗಡೆ ಮಾಡಿ ಆದೇಶಿಸಿದೆ.

1. **ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**

**(ರೂ.ಲಕ್ಷಗಳಲ್ಲಿ)**

| ಕ್ರ ಸಂ | ಕಾರ್ಯಕ್ರಮ/ ಲೆಕ್ಕಶೀರ್ಷಿಕೆ | 2022-23ನೇ ಸಾಲಿಗೆ ಒದಗಿಸಿರುವ ಆಯವ್ಯಯ | ಮೊದಲನೇ ತ್ರೈಮಾಸಿಕದಲ್ಲಿ ಬಿಡುಗಡೆ ಮಾಡಿರುವ ಮೊತ್ತ |
|---|---|---|---|
| 1 | **ನಿರ್ದೇಶನ ಮತ್ತು ಆಡಳಿತ 2225-03-001-0-01** | | |
| | ಪೂರಕ ವೆಚ್ಚಗಳು ಆಬ್ಜೆಕ್ಟೀವ್ ಕೋಡ್-015 | 4.00 | 1.00 |

---2